ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಗಳ ಕೊರತೆ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

459(388) ಮಾನ್ಯ ಪಶುಸಂಗೋಪನೆ ಹಾಗೂ Heśöï ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಈ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಗಳು ಹಾಗೂ ಚುಚ್ಚುಮದ್ದುಗಳು ದೊರೆಯುವುದಿಲ್ಲವೆಂದು ಫಲಕದಲ್ಲಿ ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಜೀವ ರಕ್ಷಕ ಔಷಧಿ ಮತ್ತು ಚುಚ್ಚುಮದ್ದುಗಳನ್ನು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?